N-72-(13)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 72ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

2006 ರಿಂದ ಈಚೆಗೆ ನೇಮಕವಾಗಿರುವ ಶಿಕ್ಷಕರು ಹಾಗೂ ಎಲ್ಲಾ ಸರ್ಕಾರಿ ನೌಕರರಿಗೆ ಜಾರಿಗೆ ತಂದಿರುವ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಹೊಸ ಪಿಂಚಣಿ ಯೋಜನೆಯನ್ನು ಸಮರ್ಪಕವಾಗಿ ಇದುವರೆಗೆ ಜಾರಿಗೊಳಿಸಿರುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಇದುವರೆವಿಗೂ ಈ ಯೋಜನೆಯನ್ನು ಜಾರಿಗೊಳಿಸದೆ ಹಲವಾರು ನೌಕರರು ಈಗಾಗಲೇ ನಿವೃತ್ತಿಯಾಗಿದ್ದು, ಜೀವನ ನಡೆಸಲು ತುಂಬಾ ತೊಂದರೆಯಾಗಿದೆ. ಆದ್ದರಿಂದ 2006ರ ನಂತರ ನೇಮಕವಾಗಿರುವ ಎಲ್ಲಾ ನೌಕರರಿಗೂ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಕಡ್ಡಾಯವಾಗಿ ಜಾರಿಗೆ ತರಬೇಕೆಂಬ ವಿಷಯದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆದಿರುತ್ತಾರೆ.

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ನೂತನ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ನೂತನ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ಮುಂದುವರೆದು, ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರಂದು ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

**ಸಂಖ್ಯೆ: ಆಇ 45 ಪಿಇಎನ್ 2021**

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ

ಶ್ರಿ-72 (67)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಕೆ.ಸಿ.ಕೊಂಡಯ್ಯ, ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ, ಶ್ರೀ ಎಸ್.ಆರ್.ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಅಡಗೂರು ಹೆಚ್ ವಿಶ್ವನಾಥ್, ಶ್ರೀ ಮರಿತಿಬ್ಬೇಗೌಡ, ಶ್ರೀ ಆರ್. ಧರ್ಮಸೇನ ರವರುಗಳ ಗಮನ ಸೆಳೆದಿರುವ ಸೂಚನೆಗೆ ಉತ್ತರ.**

**ವಿಷಯ:**

ಹಿಂದುಳಿದ ವರ್ಗಗಳ ಆಯೋಗವು 2014-15ನೇ ಸಾಲಿನಲ್ಲಿ ಕೈಗೊಂಡಿರುವ ಜಾತಿ ಜನಗಣತಿ ಸಮೀಕ್ಷಾ ವರದಿಯನ್ನು ಸಲ್ಲಿಸದಿರುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳ ಗಮನ ಸೆಳೆಯುವುದು.

**ಉತ್ತರ:**

ಶ್ರೀ ಹೆಚ್. ಕಾಂತರಾಜು ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಎಲ್ಲಾ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2015ರಲ್ಲಿ ಕೈಗೊಳ್ಳಲಾಗಿದ್ದು, ಸಮೀಕ್ಷೆಯ ವರದಿಯನ್ನು ಸಿದ್ಧಪಡಿಸಿರುತ್ತದೆ. ಶ್ರೀ ಹೆಚ್ ಕಾಂತರಾಜು ರವರ ನೇತೃತ್ವದ ಆಯೋಗದ ಪದಾವಧಿಯು ದಿನಾಂಕ: 21.09.2019 ರಂದು ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಲ್ಲಿಸಲಾಗಿರುವುದಿಲ್ಲ.

ಪ್ರಸ್ತುತ ಶ್ರೀ ಕೆ.ಜಯಪ್ರಕಾಶ ಹೆಗ್ಡೆ ಇವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವನ್ನು ದಿನಾಂಕ: 23.11.2020ರಂದು ಸರ್ಕಾರದಿಂದ ನೇಮಕಗೊಳಿಸಲಾಗಿದ್ದು, ಈ ಬಗ್ಗೆ ಅಧ್ಯಕ್ಷತೆಯ ಮೇರೆಗೆ ಅಗತ್ಯ ಕ್ರಮವಹಿಸಲಾಗುವುದು.

ಸಂಖ್ಯೆ: ಹಿಂವಕ 67 ಬಿಸಿಎ 2021

(ಕೋಟಾ ಶ್ರೀನಿವಾಸ ಪೂಜಾರಿ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ
ಇಲಾಖೆ